# 1ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ನಂಜನಗೂಡು.

## ಸಿಸಿ ಸಂಖ್ಯೆ 640/2026

ಪಿರ್ಯಾದುದಾರರು : ಕವಲಂದೆ ಪೊಲೀಸ್ ಠಾಣೆ, ನಂಜನಗೂಡು

ವಿರುದ್ಧ

ಆರೋಪಿಗಳು:

| |
|---|
| ಕಿರಣ್ ಬಿನ್ ಲೇಟ್ ದೊರೆಸ್ವಾಮಿ 29 ವರ್ಷ<br>ವಾಸಃಹೆಡತಲೆ ಗ್ರಾಮ, ನಂಜನಗೂಡು ತಾಲ್ಲೂಕು |

*** *** ***

ಆಪಾದನೆ

ಶ್ರೀಮತಿ.ಸರಿತಾ ಕುಮಾರಿ.ಎ.ಎಂ, ಬಿ.ಎ.,ಎಲ್.ಎಲ್.ಬಿ., 1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನಂಜನಗೂಡು ಆದ ನಾನು ಆರೋಪಿತರಾದ ನಿಮ್ಮ ಮೇಲೆ ಆಪಾದಿಸುವುದೇನೆಂದರೆ:-

ದಿನಾಂಕ 19.11.2025 ರಂದು ಸಂಜೆ 06.30 ಗಂಟೆಯಲ್ಲಿ ನಂಜನಗೂಡು ತಾಲ್ಲೂಕು ಕವಲಂದೆ ಪೊಲೀಸ್ ಠಾಣಾ ವ್ಯಾಪ್ತಿಗೆ ಸೇರಿದ ಹೆಡತಲೆ ಗ್ರಾಮದ ಅರಳಿ ಮರದ ಸರ್ಕಲನಲ್ಲಿ ಹಾದು ಹೋಗಿರುವ ಹೆಮ್ಮರಗಾಲ ಬದನವಾಳು ರಸ್ತೆಯ ಎಡಭಾಗದ ಪುಟ್ಪಾತ್ ನಲ್ಲಿ ಚಾಸಾ.1 ರವರು ಮನೆಯಿಂದ ಹಾಲಿನ ಡೈರಿ ಕಡೆಗೆ ಹೋಗುತ್ತಿದ್ದಾಗ, ಎದುರುಗಡೆಯಿಂದ ಆರೋಪಿತರಾದ ನೀವು ಕೆಎ-55-ಟಿ-4549 ಮಿನಿ ಟ್ರಾಕ್ಟರನ್ನು ಅತಿವೇಗವಾಗಿ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಚಾಸಾ.1 ರವರಿಗೆ ಡಿಕ್ಕಿ ಮಾಡಿ ಅಪಘಾತಪಡಿಸಿರುತ್ತೀರಿ. ಆದ್ದರಿಂದ ಆರೋಪಿಯಾದ ನೀವು

ಭಾರತೀಯ ನ್ಯಾಯ ಸಂಹಿತೆಯ ಕಲಂ.281 ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ

ಕೊನೆಯದಾಗಿ, ಅದೇ ದಿನ, ಸಮಯ ಹಾಗೂ ಸ್ಥಳದಲ್ಲಿ ಆರೋಪಿತರಾದ ನೀವು ಮಾಡಿದ ಸದರಿ ಅಪಘಾತದಿಂದ ಚಾಸಾ.1 ರವರು ಕೆಳಕ್ಕೆ ಬಿದ್ದಿದ್ದು, ಚಾಸಾ.1 ರವರಿಗೆ ಎಡಕಿವಿಯ ಬಳಿ, ಎಡಕಾಲಿಗೆ, **ಬಲಮೊಣಕಾಲಿಗೆ , ಬಲಕಾಲಿನ ಪಾದದ ಬಳಿ** ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿರುತ್ತೀರಿ. ಆದ್ದರಿಂದ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ.125(ಎ) ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

1. **ಈಗ ನಿಮಗೆ ಓದಿ ಹೇಳಿದ ನಿಮ್ಮ ಮೇಲಿನ ಆರೋಪ ನಿಮಗೆ ತಿಳಿಯಿತೇ?**
   ಉಃ

2. **ನಿಮ್ಮ ಮೇಲಿರುವ ಆರೋಪವನ್ನು ಒಪ್ಪಿಕೊಳ್ಳುವಿರಾ? ಅಥವಾ ನಿಮ್ಮ ಪರವಾಗಿ ವಿಚಾರಣೆ ನಡೆಸಲು ಬಯಸುವಿರಾ?**
   ಉಃ

(ಮೇಲ್ಕಂಡ ಆರೋಪವನ್ನು ಆರೋಪಿಗೆ ಓದಿ ಹೇಳಿ ಕೇಳಲಾಯಿತು. ಆರೋಪಿ ಕೊಟ್ಟ ಉತ್ತರವನ್ನು ಅವರು ಉತ್ತರಿಸಿದಂತೆಯೇ ಬರೆದುಕೊಂಡಿದ್ದು ಸಂಪೂರ್ಣ ಹಾಗೂ ಸರಿಯಾದ ಮಾಹಿತಿಯನ್ನು ಒಳಗೊಂಡಿದೆ ಎಂದು ದಿನಾಂಕ 03.03.2026 ರಂದು ತೆಗೆದ ನ್ಯಾಯಾಲಯದಲ್ಲಿ ದೃಢೀಕರಿಸಿರುತ್ತೇನೆ.)

**1ನೇ ಹೆಚ್ಚುವರಿ** ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ.,
ನಂಜನಗೂಡು.